**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ**

---

ವಿಷಯ:- ಕರೋನಾ ವೈರಸ್ ಹರಡಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ದಿ:14-04-2020 ರಂದು ಮಧ್ಯರಾತ್ರಿ 12-00 ಗಂಟೆವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಮುಂಜಾಗ್ರತಾ ಕ್ರಮವಾಗಿ ಸಿ.ಆರ್.ಪಿ.ಸಿ 1973 ರ ಕಲಂ 144 ರ ಮೇರೆಗೆ ವಿಧಿಸಲಾಗಿದ್ದ ನಿಷೇಧಾಜ್ಞೆಯನ್ನು ಮುಂದುವರೆಸಿ ಆದೇಶ ಹೊರಡಿಸುವ ಬಗ್ಗೆ.

DISTRICT MAGISTRATE CHITRADURGA

ಉಲ್ಲೇಖ:
1) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ರವರ ಆದೇಶ ಸಂ:ಡಿಡಿ/ಎಸ್.ಎಸ್.ಯು/ಕೋವಿಡ್-19/17/19-20 ದಿ:13-03-2020 ಹಾಗೂ ಮುಂದುವರೆದ ಆದೇಶಗಳು.
2) ಈ ಕಚೇರಿ ಸಮ ಸಂಖ್ಯೆ ಆದೇಶ ದಿನಾಂಕ:22-03-2020.
3) The Katnataka Epidemic Diseases COVID-19 Regulations 2020 Section 12(III)

$$$$$$$$

**ಪ್ರಸ್ತಾವನೆ:**

ಕರೋನಾ ವೈರಸ್‌ನಿಂದಾಗಿ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ಸೂಚನೆಗಳನ್ನು ನೀಡಿದ್ದು, ಅದರಂತೆ ಸಾರ್ವಜನಿಕರು ಹೆಚ್ಚಾಗಿ ಸೇರುವಂತಹ ಸಂತೆ ಜಾತ್ರೆ ಸಮಾವೇಶ, ಸಮ್ಮೇಳನ, ಮದುವೆ, ಕ್ರೀಡಾ ಕೂಟ ಹಾಗೂ ಧಾರ್ಮಿಕ ಸಮಾರಂಭಗಳಲ್ಲಿ ಹೆಚ್ಚಾಗಿ ಸೇರುವುದರಿಂದ ಅಲ್ಲಿ ಕರೋನಾ ವೈರಸ್ ಸೋಂಕು ಒಬ್ಬರಿಂದ ಒಬ್ಬರಿಗೆ ಹರಡುವಂತಹ ಸಾಧ್ಯತೆಗಳಿದ್ದು, ಇಂತಹ ಸಂದರ್ಭಗಳಲ್ಲಿ ಕರೋನ ವೈರಸ್ ಸೋಂಕು ಹರಡದಂತೆ ಸಾರ್ವಜನಿಕರ ಹಿತದೃಷ್ಟಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ದಿ:14-04-2020 ರವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ನಡೆಯಲಿರುವ ಸಂತೆ, ಜಾತ್ರೆ, ಸಮಾವೇಶ, ಮೆರವಣಿಗೆ/ ಸಮ್ಮೇಳನಾ, ಕ್ರೀಡಾ ಕೂಟ ಹಾಗೂ ಯಾವುದೇ ಧಾರ್ಮಿಕ ಸಮಾರಂಭಗಳನ್ನು ನಡೆಸದಂತೆ ನಿಷೇಧಿಸಿ ಉಲ್ಲೇಖ(2) ರಲ್ಲಿ ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು ಸರ್ಕಾರವು ಕರೋನಾ ವೈರಸ್ಸ್ ಸೊಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಉಲ್ಲೇಖ(1) ರ ನಿರ್ದೇಶನಗಳನ್ನು ಮುಂದುವರೆಸಿ ದಿನಾಂಕ:03-05-2020 ರವರೆಗೆ ಲಾಕ್‌ಡೌನ್ ವಿಸ್ತರಣೆ ಮಾಡಿರುತ್ತದೆ. ಈ ಸಂಬಂಧ ಉಲ್ಲೇಖ(2) ರಂತೆ ಹೊರಡಿಸಲಾಗಿದ್ದ ಆದೇಶವನ್ನು ಈ ಕೆಳಕಂಡಂತೆ ಮುಂದುವರೆಸಿ ಆದೇಶಿಸಿರುತ್ತೇನೆ.

**:ಆದೇಶ:**

**ಸಂಖ್ಯೆಎಂ.ಎ.ಜೆ(3) ಸಿಆರ್- 144/2019-20** **ದಿನಾಂಕ:14-04-2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ಚಿತ್ರದುರ್ಗ ಜಿಲ್ಲೆಯಾದ್ಯಂತ ಕೋವಿಡ್-19 ಕರೋನಾ ವೈರಸ್ಸ್ ಸೋಂಕು ಹರಡದಂತೆ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಸಿ.ಆರ್.ಪಿ.ಸಿ 1973 ರ ಕಲಂ 144 ರ ಮೇರೆಗೆ ದಿನಾಂಕ:14-04-2020 ರಂದು ಮಧ್ಯರಾತ್ರಿ ರಾತ್ರಿ 12-00 ಗಂಟೆಯಿಂದ ದಿನಾಂಕ:03-05-2020 ರ ಮಧ್ಯರಾತ್ರಿ 12-00 ಗಂಟೆವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಸಾರ್ವಜನಿಕ ಸ್ಥಳಗಳಲ್ಲಿ 05 ಕ್ಕೂ ಹೆಚ್ಚು ಜನ ಸೇರದಂತೆ ನಿಷೇಧಿಸಿ ಆದೇಶಿಸಿರುತ್ತೇನೆ.

ಸದರಿ ಆದೇಶವು ಸಾರ್ವಜನಿಕರ ಅತ್ಯಾವಶ್ಯಕ ವಸ್ತುಗಳು/ಆಹಾರ ಸಾಮಗ್ರಿಗಳ ಪೂರೈಕೆಗೆ, ತುರ್ತು ಆರೋಗ್ಯ ಸೇವೆ, ಅಗ್ನಿಶಾಮಕ ಸೇವೆಗಳು, ಶವಸಂಸ್ಕಾರ, ಇನ್ನಿತರ ಅಗತ್ಯ ಸೇವೆಗಳಿಗೆ ಅನ್ವಯಿಸುವುದಿಲ್ಲ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುವುದು.

**(ಆರ್.ವಿನೋತ್ ಪ್ರಿಯಾ)**
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

1) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

--2

Scanned with CamScanner

3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
5) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ರವರಿಗೆ ಮಾಹಿತಿಗಾಗಿ.
6) ಜಿಲ್ಲೆಯ ಎಲ್ಲಾ ತಾಲ್ಲೂಕು ದಂಡಾಧಿಕಾರಿಗಳಿಗೆ.
7) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned with CamScanner